## ಸಿವಿಲ್ ಮತ್ತು ಜೆ.ಎಮ್.ಎಫ್.ಸಿ ನ್ಯಾಯಾಧೀಶರ ನ್ಯಾಯಾಲಯ, ಯಾದಗಿರಿ.

**ಸಿ.ಸಿ ನಂಃ 660/ 2017**

| | | |
|---|---|---|
| ಸಾಕ್ಷಿಯ ಹೆಸರುಃ | ಶ್ರೀ ಬಸಪ್ಪ | ಫ್ರಾಸಾಃ **07** |
| ತಂದೆ ಹೆಸರುಃ | ಲಚ್ಚಪ್ಪ | ಚಾಸಾಃ **03** |
| ವಯಸ್ಸುಃ | **66** ವರ್ಷ | ದಿಃ **21-07-2026** |
| ಉದ್ಯೋಗಃ | ಒಕ್ಕಲುತನ | ಸಾಕ್ಷಿದಾರರಿಗೆ ಪ್ರಮಾಣ ವಚನ ಬೋಧಿಸಲಾಯಿತು. |
| ವಾಸ ಸ್ಥಳಃ | ಅರಕೇರಾ ಕೆ ಗ್ರಾಮ | |

ಮುಖ್ಯ ವಿಚಾರಣೆ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ

ನನಗೆ ಚಾಸಾಃ 2 ರವರ ಪರಿಚಯ ಇಲ್ಲ. ನನಗೆ ಆರೋಪಿತರ ಪರಿಚಯವೂ ಸಹ ಇಲ್ಲ ಹಾಗೂ ನಾನು ಅವರನ್ನು ಈ ಹಿಂದೆ ನೋಡಿಲ್ಲ. ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇಲ್ಲ. ಸಾಕ್ಷಿಯು ನಿಪಿ 6 ರ ಪಂಚನಾಮೆಯಲ್ಲಿನ ತಮ್ಮ ಸಹಿಯನ್ನು ಈಗ ನೋಡಿ ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ-6 ಬಿ ಎಂದು ಗುರುತಿಸಲಾಯಿತು. ಪಂಚನಾಮೆಯಲ್ಲಿ ಬರೆದಿರುವ ವಿಷಯಗಳ ಬಗ್ಗೆ ನನಗೆ ಮಾಹಿತಿ ಇಲ್ಲ. ಪೋಲಿಸರು ನನ್ನ ಸಮಕ್ಷಮ ಯಾವುದೇ ಪಂಚನಾಮೆ ಮಾಡಿಲ್ಲ.

( ಈ ಹಂತದಲ್ಲಿ ಮಾನ್ಯ ಸ.ಸ.ಅ ರವರು ಸಾಕ್ಷಿದಾರರನ್ನು ಪ್ರತಿಕೂಲ ಸಾಕ್ಷಿದಾರರು ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದರು - ಅನುಮತಿ ನೀಡಲಾಯಿತು)

ಪಾಟೀ ಸವಾಲು ಃ ಮಾನ್ಯ ಸ.ಸ.ಅ. ರವರಿಂದಃ

ದಿಃ 01-05-2017 ರಂದು ಪೋಲಿಸರು ನನ್ನನ್ನು ಮತ್ತು ಚಾಸಾಃ 2 ರವರನ್ನು ಪಂಚರನ್ನಾಗಿ ಬರಮಾಡಿಕೊಂಡು ಯಾದಗಿರಿ-ಗುರುಮಠಕಲ್ ರಸ್ತೆಯಲ್ಲಿ ಬರುವ ನೀರಿನ ಘಟಕದ ಹತ್ತಿರ ಬೆಃ 10-45 ರಿಂದ 11-50 ವರೆಗೆ ನಿಪಿ-6 ರಂತೆ ಸ್ಥಳ ಪಂಚನಾಮೆ ಮಾಡಿದ್ದರು ಎಂದರೆ ಸರಿಯಲ್ಲ. ನಾನು ಸ್ಥಳದಲ್ಲಿ ಹಾಜರಿದ್ದು ಪಂಚನಾಮೆಗೆ ಸಹಿ ಮಾಡಿದ್ದೆನು ಎಂದರೆ ಸರಿಯಲ್ಲ. ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

<u>ಪಾಟೀ ಸವಾಲು ಆರೋಪಿತರ ಪರಃ  ವಕೀಲರವರಿಂದಃ</u>

ಯಾವುದೇ ಪಾಟೀ ಸವಾಲು ಇಲ್ಲ ಎಂದು ತಿಳಿಸಿರುತ್ತಾರೆ.

ಮರುವಿಚಾರಣೆ ಃ ಇರುವುದಿಲ್ಲ.

( ಸಾಕ್ಷಿ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು. )

**ಓ. ಹೇ. ಕೇ. ಸರಿ ಇದೆ.**

ಜೆಎಂಎಫ್‌ಸಿ ನ್ಯಾಯಾಧೀಶರು
ಯಾದಗಿರಿ.